ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ವೃದ್ಧ ಪಾಲಕರ ರಕ್ಷಣೆ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

365 (335) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ವೃದ್ಧ ಪಾಲಕರನ್ನು ಇಂದಿನ ಯುವ ಜನಾಂಗ ಕಡೆಗಣಿಸುತ್ತಿದ್ದು ಅಸಾಹಯಕ ವೃದ್ಧರ ರಕ್ಷಣೆ ಮತ್ತು ಸುರಕ್ಷತೆಯ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳನ್ನು ಸಂಯೋಜಿಸಿ ಮನೆ ವಾತಾವರಣ ಇರುವಂತಹ ಹೊಸ ತರಹದ ಪಾಲನಾ ಗೃಹಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು;

(ಇ) ವೃದ್ಧರನ್ನು ಕಡೆಗಣಿಸಿ ಅವರ ಅಂತಿಮ ದಿನಗಳಲ್ಲಿ ಬೀದಿಗೆ ದೂಡುವ ಕುಟುಂಬಸ್ಥರ ಮೇಲೆ ಕ್ರಮ ಕೈಗೊಳ್ಳುವ ಕಾನೂನು ರೂಪಿಸುವ ಬಗ್ಗೆ ಸರ್ಕಾರ ಚಿಂತಿಸುವುದೇ?